ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 22/12/2019

# ಇಂದು 15 ಶಾಸಕರ ಪ್ರಮಾಣ ವಚನ

**ಬೆಂಗಳೂರು:** ವಿಧಾನಸಭೆಗೆ ನಡೆದ ಉಪ ಚುನಾವಣೆಯಲ್ಲಿ ಚುನಾಯಿತರಾಗಿರುವ ನೂತನ ಶಾಸಕರು ಭಾನುವಾರ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೆಳಗ್ಗೆ 10 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ನೂತನ ಶಾಸಕರು ಅಧಿಕಾರ ಹಾಗೂ ಗೌಪ್ಯತೆಯ ಪ್ರಮಾಣ ವಚನವನ್ನು ಸ್ವೀಕರಿಸಲಿದ್ದಾರೆ. ವಿಧಾನಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ನೂತನ ಶಾಸಕರಿಗೆ ಪ್ರಮಾಣ ವಚನ ಬೋಧಿಸಲಿದ್ದಾರೆ. ಬಿಜೆಪಿಯ ಮಹೇಶ್ ಕುಮಟಳ್ಳಿ(ಅಥಣಿ), ಡಾ. ಕೆ.ಸುಧಾಕರ್ (ಚಿಕ್ಕಬಳ್ಳಾಪುರ), ರಮೇಶ್ ಜಾರಕಿಹೊಳಿ (ಗೋಕಾಕ), ಬಿ.ಸಿ.ಪಾಟೀಲ್(ಹಿರೇಕೆರೂರು), ಶ್ರೀಮಂತ ಪಾಟೀಲ್(ಕಾಗವಾಡ), ಭೈರತಿ ಬಸವರಾಜ್(ಕೆ.ಆರ್.ಪುರ), ಕೆ.ಸಿ. ನಾರಾಯಣಗೌಡ (ಕೆ.ಆರ್.ಪೇಟೆ), ಕೆ. ಗೋಪಾಲಯ್ಯ (ಮಹಾಲಕ್ಷ್ಮಿ ಲೇಔಟ್), ಆನಂದ್ ಸಿಂಗ್(ವಿಜಯನಗರ), ಎಂ.ಜಿ. ಅರುಣ್ ಕುಮಾರ್(ರಾಣೆಬೆನ್ನೂರು), ಶಿವರಾಮ ಹೆಬ್ಬಾರ್(ಯಲ್ಲಾಪುರ), ಎಸ್.ಟಿ.ಸೋಮಶೇಖರ್ (ಯಶವಂತಪುರ) ನೂತನ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಕಾಂಗ್ರೆಸ್‌ನ ರಿಜ್ವಾನ್ ಅರ್ಷದ್(ಶಿವಾಜಿನಗರ), ಎಚ್.ಪಿ.ಮಂಜುನಾಥ್(ಹುಣಸೂರು) ಹಾಗೂ ಶರತ್ ಬಚ್ಚೇಗೌಡ(ಹೊಸಕೋಟೆ) ಇದೇ ವೇಳೆ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.